O.S. No.  147 /2024
ಪಿ.ಡಬ್ಲ್ಯು-01

**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ಹೆಗ್ಗಡದೇವನಕೋಟೆ, ಮೈಸೂರು ಜಿಲ್ಲೆ.**

## O.S. No. 147/2024

**ಸಾಕ್ಷಿಯನ್ನು ದಿನಾಂಕಃ 24.10.2025 ರಂದು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆಃ ವಾದಿ    ಪರ  ಶ್ರೀ.ಬಿ.ಎಸ್.ಎಸ್ ವಕೀಲರಿಂದಃ**

ಈ ದಾವೆಯಲ್ಲಿ ನಾನು ವಾದಿ ಯಾಗಿರುತ್ತೇನೆ. ನನ್ನ ಮುಖ್ಯ ವಿಚಾರಣೆಯ ಬದಲಾಗಿ ಪ್ರಮಾಣ ಪತ್ರ ಸಲ್ಲಿಸಿದ್ದು, ಸದರಿ ಪ್ರಮಾಣ ಪತ್ರದಲ್ಲಿರುವ ಅಂಶಗಳನ್ನು ನಾನೇ ಖುದ್ದಾಗಿ ಬರೆಸಿರುತ್ತೇನೆ ಹಾಗೂ ಅದರಲ್ಲಿರುವ ಅಂಶಗಳು ಸತ್ಯವೆಂದು ಪ್ರಮಾಣಿಕರಿಸುತ್ತೇನೆ. ಅದರಲ್ಲಿರುವ ಸಹಿ ನನ್ನದೇ ಆಗಿರುತ್ತದೆ.

ನನ್ನ ದಾವೆಯ ಜೊತೆ  ಕೆಲವು ದಾಖಲೆಗಳನ್ನು ಹಾಜರುಪಡಿಸಿರುತ್ತೇನೆ. ದಿನಾಂಕಃ 11.06.2012 ರಂದು ನೋಂದಾಯಿತ ದಾನ ಪತ್ರ  ಹಾಗೂ 11 ಇ ನಕಾಶೆ ಹಾಜರುಪಡಿಸಿದ್ದು ಅದನ್ನು ನಿಪಿ 1 ಎಂದು, 4 ಗಣಕಿಕೃತ ಪಹಣಿ ಪತ್ರಿಕೆಗಳನ್ನು ಹಾಜರುಪಡಿಸಿದ್ದು ಅವುಗಳನ್ನು ಕ್ರಮವಾಗಿ ನಿಪಿ 2 ರಿಂದ 5 ಎಂದು, ಮ್ಯುಟೇಷನ್ ರಿಜಿಸ್ಟರ್ ಪ್ರತಿ ಹಾಜರುಪಡಿಸಿದ್ದು ಅದನ್ನು ನಿಪಿ 6 ಎಂದು, ಒಂದು ಕಂದಾಯ ರಸೀದಿ ಹಾಜರುಪಡಿಸಿದ್ದು ಅದನ್ನು ನಿಪಿ 7 ಎಂದು, ಒಂದು ಪಟ್ಟಾ ಹಾಗೂ ರಸೀದಿ ಪುಸ್ತಕ ಹಾಜರುಪಡಿಸಿದ್ದು ಅದನ್ನು ನಿಪಿ 8 ಎಂದು, 11 ಪೋಟೋ ಹಾಗೂ ಅದಕ್ಕೆ ಸಂಬಂಧಿಸಿದ ಒಂದು ಸಿ.ಡಿ ಹಾಜರುಪಡಿಸಿದ್ದು ಸದರಿ ಪೋಟೋಗಳನ್ನು ಕ್ರಮವಾಗಿ ನಿಪಿ 9 ರಿಂದ 19 ಹಾಗೂ ಸಿ.ಡಿ ಯನ್ನು ನಿಪಿ 20 ಎಂದು ಗುರುತಿಸಲಾಯಿತು.

**ಈ ಹಂತದಲ್ಲಿ ವಾದಿ    ಪರ ವಕೀಲರು ಮುಂದುವರೆದ ಮುಖ್ಯ ವಿಚಾರಣೆಗೆ ಸಮಯಾವಕಾಶವನ್ನು ಕೋರಿದ್ದು, ಸಮಯಾವಕಾಶವನ್ನು  ನೀಡಿ ಮುಂದೂಡಲಾಯಿತು.**

(ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.)

**ಓ ಹೇ ಕೇ ಸಾ ಸ ಇ ಒ.,**

**ಪ್ರಧಾನ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ.,**
**ಹೆಗ್ಗಡದೇವನಕೋಟೆ.**